# Akashvani : Bangalore
# Regional Bulletin In Kannada
# 18.04.2026 / 18.40  hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಮಹಿಳಾ ಮೀಸಲಾತಿಗೆ ವಿರೋಧವಿಲ್ಲ ; ಮಸೂದೆ ವಿಷಯದಲ್ಲಿ ಕೇಂದ್ರ ಸರ್ಕಾರದಿಂದ ರಾಜಕೀಯ - ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ಕಾಂಗ್ರೆಸ್ ಪಕ್ಷದ ಮಹಿಳಾ ವಿರೋಧಿ ಧೋರಣೆ ಖಂಡಿಸಿ ರಾಜ್ಯಾದ್ಯಂತ ಪ್ರತಿಭಟನೆ ; ಬಿಜೆಪಿ ಮಹಿಳಾ ಮೋರ್ಚಾ ಘೋಷಣೆ**

**೩. ರೈತರ ಹಿತದೃಷ್ಟಿಯಿಂದ ತೊಗರಿ ಖರೀದಿ ಅವಧಿಯನ್ನು ಮೇ ೧೫ರವರೆಗೆ ವಿಸ್ತರಿಸಿದ ಕೇಂದ್ರ ಸರ್ಕಾರ**

**೪. ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ನೀಡಿರುವ ೧೭೬ ರನ್‌ಗಳ ಗುರಿ ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್**

**<><*<><>*><>**

ಮಹಿಳಾ ಮೀಸಲಾತಿಗೆ ತಮ್ಮ ವಿರೋಧವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಷೇತ್ರ ಮರುವಿಂಗಡನೆ ಮತ್ತು ಮಹಿಳಾ ಮೀಸಲಾತಿಯನ್ನು ಒಟ್ಟಿಗೆ ತಂದಿದ್ದರಿಂದ ಮಹಿಳಾ ಮೀಸಲಾತಿ ಮಸೂದೆ ವಿಫಲವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ೨೦೨೩ರಲ್ಲಿಯೇ ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಅಂಗೀಕಾರವಾಗಿದೆ. ಸಂವಿಧಾನ ತಿದ್ದುಪಡಿ ತಂದಿದ್ದರಿಂದ ಅದು ವಿಫಲವಾಯಿತು. ಕ್ಷೇತ್ರ ಮರು ವಿಂಗಡನೆ ಮಾಡದೇ ಕೇವಲ ಮಹಿಳಾ ಮೀಸಲಾತಿ ಮಂಡನೆಯಾಗಿದ್ದರೆ ಅಂಗೀಕಾರವಾಗುತ್ತಿತ್ತು. ಕೇಂದ್ರ ಸರ್ಕಾರ ರಾಜಕೀಯಕ್ಕಾಗಿ ಕ್ಷೇತ್ರ ಮರುವಿಂಗಡನೆ ಮತ್ತು ಮಹಿಳಾ ಮೀಸಲಾತಿಯನ್ನು ಒಟ್ಟಿಗೆ ತಂದಿದ್ದೇ ಮಸೂದೆ ವಿಫಲವಾಗಲು ಕಾರಣ ಎಂದಿದ್ದಾರೆ.

**<><*<><>*><>**

ಕಾಂಗ್ರೆಸ್ ಪಕ್ಷದ ಮಹಿಳಾ ವಿರೋಧಿ ನೀತಿಗಳನ್ನು ಖಂಡಿಸಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುವುದಾಗಿ ಬಿಜೆಪಿ ಮಹಿಳಾ ಮೋರ್ಚಾ ಘೋಷಿಸಿದೆ. ಬೆಂಗಳೂರಿನ ಬಿಜೆಪಿ ರಾಜ್ಯ ಪ್ರಧಾನ ಕಚೇರಿ ಜಗನ್ನಾಥ ಭವನದಲ್ಲಿ ಇಂದು ನಡೆದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಹಿಳಾ ಶಕ್ತಿಯನ್ನು ತಡೆಯುವ ಕೈಗಳು ಮಹಿಳಾ ಹಕ್ಕುಗಳನ್ನು ಹತ್ತಿಕ್ಕಿದ ಕಾಂಗ್ರೆಸ್ ಎಂಬ ಶಿರ್ಷಿಕೆಯ ಪೋಸ್ಟರ್‌ಅನ್ನು ಬಿಡುಗಡೆ ಮಾಡಲಾಯಿತು. ಈ ವೇಳೆ ಮಾತನಾಡಿದ ಬಿಜೆಪಿ ಮಹಿಳಾ ಮೋರ್ಚಾ ರಾಜ್ಯ ಘಟಕದ ಅಧ್ಯಕ್ಷೆ ಸಿ.ಮಂಜುಳಾ, ಮಹಿಳಾ ಮೀಸಲಾತಿಯ ಸಂಭ್ರಮ ಈಗ ಕಾಂಗ್ರೆಸ್ ವಿರುದ್ಧದ ಆಕ್ರೋಶವಾಗಿ ಬದಲಾಗಿದೆ. ಮೈಸೂರು, ಗದಗ, ನೆಲಮಂಗಲ ಮತ್ತು ಕೋಲಾರ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಈಗಾಗಲೇ ಪ್ರತಿಭಟನೆಗಳು ಆರಂಭವಾಗಿದ್ದು, ನಾಳೆ ಬೆಂಗಳೂರಿನಲ್ಲಿ ಪ್ರತಿಭಟನೆಗಳನ್ನು ಹಮ್ಮಿಕೊಳ್ಳಲು ಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಜಂಟಿ ಪತ್ರಿಕಾಗೋಷ್ಠಿಯಲ್ಲಿ ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ ಮತ್ತು ವಿಧಾನಪರಿಷತ್ತಿನ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಉಪಸ್ಥಿತರಿದ್ದರು.

**<><*<><>*><>**

ದೇಶದ ರೈತರ ಹಿತರಕ್ಷಣೆಗಾಗಿ ಕೇಂದ್ರ ಸರ್ಕಾರ ಮಹತ್ವದ ಕ್ರಮಗಳನ್ನು ಪ್ರಕಟಿಸಿದ್ದು, ವಿಶೇಷವಾಗಿ ಕರ್ನಾಟಕದ ತೊಗರಿ ಬೆಳೆಗಾರರಿಗೆ ನೆರವಾಗುವ ನಿಟ್ಟಿನಲ್ಲಿ ಖರೀದಿ ಅವಧಿಯನ್ನು ವಿಸ್ತರಿಸಿದೆ. ರಾಜ್ಯದಲ್ಲಿ ಈ ಬಾರಿ ತೊಗರಿ ಬೆಳೆಗಾರರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರ ತೊಗರಿ ಖರೀದಿ ಪ್ರಕ್ರಿಯೆ ಕಾಲಮಿತಿಯನ್ನು ಮೇ

೧೫ರವರೆಗೆ ವಿಸ್ತರಿಸಿದೆ. ಇದರಿಂದಾಗಿ ನಿಗದಿತ ಅವಧಿಯೊಳಗೆ ಬೆಳೆ ಮಾರಾಟ ಮಾಡಲು ಸಾಧ್ಯವಾಗದ ರೈತರಿಗೆ ಹೆಚ್ಚಿನ ಕಾಲಾವಕಾಶ ದೊರೆದಂತಾಗಿದೆ. ಈ ನಿರ್ಧಾರ ರೈತರು ಆತುರದಲ್ಲಿ ಅಥವಾ ಕಡಿಮೆ ಬೆಲೆಗೆ ಖಾಸಗಿ ವರ್ತಕರಿಗೆ ಬೆಳೆ ಮಾರಾಟ ಮಾಡುವುದನ್ನು ತಪ್ಪಿಸಲು ಸಹಕಾರಿಯಾಗಲಿದೆ. ಈ ಕುರಿತು ಕೇಂದ್ರ ಕೃಷಿ ಸಚಿವ ಶಿವರಾಜ್‌ಸಿಂಗ್ ಚೌಹಾಣ್ ಮಾಹಿತಿ ನೀಡಿದ್ದು, ರಾಜ್ಯದ ರೈತರು ಮಾರುಕಟ್ಟೆಯ ಏರಿಳಿತಗಳಿಂದ ನಷ್ಟ ಅನುಭವಿಸಬಾರದು ಎಂಬ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆ ಹಾವೇರಿ ಜಿಲ್ಲೆಯ ಪ್ರವಾಸ ಕೈಗೊಳ್ಳಲಿದ್ದು, ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ. ಜಿಲ್ಲೆಯ ರಾಣೆಬೆನ್ನೂರಿನ ದೊಡ್ಡಕೆರೆಯಲ್ಲಿ ಜರುಗುವ ಸಮಾರಂಭದಲ್ಲಿ ತಾಲ್ಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ನಂತರ ನಿಟ್ಟೂರ ಗ್ರಾಮಕ್ಕೆ ತಲುಪಿ 'ಬೀರಲಿಂಗೇಶ್ವರ ಸ್ವಾಮಿ ದೇವಸ್ಥಾನದ ೫೦ನೇ ವರ್ಷದ ಸುವರ್ಣ ಮಹೋತ್ಸವ, ಭಕ್ತ ಕನಕದಾಸರ ಮಹಾದ್ವಾರ ಉದ್ಘಾಟನೆ ಹಾಗೂ ಧರ್ಮಸಭಾ ಕಾರ್ಯಕ್ರಮ'ದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಹೊರ ದೇಶ, ರಾಜ್ಯಗಳಿಂದ ಮಂಗಳೂರಿನಲ್ಲಿ ಐಟಿ ಉದ್ಯಮಗಳನ್ನು ಸ್ಥಾಪಿಸುವಲ್ಲಿ ಸಿಲಿಕಾನ್ ಬೀಚ್ ಪ್ರೋಗ್ರಾಂನ ಬೇಸ್ ಕ್ಯಾಂಪ್ ಇಂದಿನ ತುರ್ತು ಅಗತ್ಯವಾಗಿದೆ ಎಂದು ಶಾಸಕ ಡಾ.ವೈ.ಭರತ್ ಶೆಟ್ಟಿ ಅಭಿಪ್ರಾಯಪಟ್ಟರು. ಕರಾವಳಿ ಕರ್ನಾಟಕದಲ್ಲಿ ನ್ಯಾನೋ ಜಿಸಿಸಿ ಹಾಗೂ ಉಪ ಕಚೇರಿಗಳನ್ನು ಸ್ಥಾಪಿಸಲು ಮುಂದಾಗುವ ಬಹುರಾಷ್ಟ್ರೀಯ, ದೇಶೀಯ ಹಾಗೂ ರಾಜ್ಯದ ಕಂಪನಿಗಳಿಗೆ ಮಾರ್ಗದರ್ಶನ ನೀಡುವ ಉದ್ದೇಶದಿಂದ ಮಂಗಳೂರಿನ ಕೊಟ್ಟಾರದ ವರ್ಕ್‌ವರ್ಕ್ ಟ್ರಯಾಂಗಲ್‌ನಲ್ಲಿ ಇಂದು ಸಿಲಿಕಾನ್ ಬೀಚ್ ಪ್ರೋಗ್ರಾಂ ವತಿಯಿಂದ ಆರಂಭಿಸಲಾಗಿರುವ ಬೇಸ್ ಕ್ಯಾಂಪ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು. ಶಿಕ್ಷಣ ಕೇಂದ್ರವಾಗಿರುವ ಮಂಗಳೂರು ಆರೋಗ್ಯ ಹಾಗೂ ಮೂಲಭೂತ ಸೌಕರ್ಯಗಳ ಕೇಂದ್ರವೂ ಆಗಿದೆ. ಮರಳಿ ಊರಿಗೆ ಅಭಿಯಾನದ ಮೂಲಕ ಈಗಾಗಲೇ ವಿದೇಶಗಳಲ್ಲಿ ಸ್ಟಾರ್ಟ್‌ಅಪ್‌ಗಳು ಹಾಗೂ ಉದ್ದಿಮೆಗಳನ್ನು ಹೊಂದಿರುವವರು ಮರಳಿ ಮಂಗಳೂರಿಗೆ ಬರಲು ಬಯಸುತ್ತಿದ್ದಾರೆ. ಅಂತಹವರಿಗೆ ಈ ಬೇಸ್‌ಕ್ಯಾಂಪ್ ಸಹಕಾರ ನೀಡಲಿದೆ ಎಂದು ಅವರು ಹೇಳಿದರು.

<><*<><>*><>

ದಾವಣಗೆರೆ ದಕ್ಷಿಣ ವಿಧಾನ ಸಭಾ ಕ್ಷೇತ್ರದ ಉಪ ಚುನಾವಣೆಯ ಫಲಿತಾಂಶಕ್ಕೂ ಪಕ್ಷ ವಿರೋಧಿ ಚಟುವಟಿಕೆಗೆ ಸಂಬಂಧಿಸಿ ಕೈಗೊಂಡ ಶಿಸ್ತು ಕ್ರಮಗಳಿಗೂ ಯಾವುದೇ ಸಂಬಂಧ ಇಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವನ್ನು ಸಚಿವ ಸ್ಥಾನದಿಂದ ಇಳಿಸುವುದು ಕೇವಲ ವದಂತಿಯಾಗಿದೆ. ಅವರು ಪಕ್ಷದ ಹಿರಿಯ ಮುಖಂಡರಾಗಿದ್ದು, ಪಕ್ಷಕ್ಕೆ ಪ್ರಾಮಾಣಿಕವಾಗಿ ದುಡಿಯುತ್ತಿದ್ದಾರೆ. ಸ್ಥಳೀಯಾಡಳಿತ ಚುನಾವಣೆ ನಡೆಸುವ ಬಗ್ಗೆ ಈಗಾಗಲೇ ಪ್ರಕ್ರಿಯೆಗಳು ಆರಂಭವಾಗಿವೆ. ಹೈಕೋರ್ಟ್ ಆದೇಶದ ಪ್ರಕಾರ ಜಿಬಿಎ ಚುನಾವಣೆಯನ್ನು ಜೂನ್ ತಿಂಗಳ ಮುನ್ನವೇ ನಡೆಸಬೇಕು. ಈಗಾಗಲೇ ಈ ಕುರಿತು ಸಿದ್ಧತೆಗಳು ನಡೆದಿವೆ ಎಂದು ಸಚಿವರು ಹೇಳಿದರು.

<><*<><>*><>

ಜಾಗತಿಕ ಸಾಂಸ್ಕೃತಿಕ ಮತ್ತು ನೈಸರ್ಗಿಕ ಪರಂಪರೆಯ ವೈವಿಧ್ಯತೆ ಮತ್ತು ಮಹತ್ವದ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಇಂದು ವಿಶ್ವ ಪಾರಂಪರಿಕ ದಿನವನ್ನು ಆಚರಿಸಲಾಗುತ್ತದೆ. ರಾಜ್ಯದ ಮೊಟ್ಟ ಮೊದಲ ವಿಶ್ವ ಪರಂಪರ ತಾಣವಾಗಿ ಗುರುತಿಸಿಕೊಂಡಿರುವ ಹಂಪಿಗೆ, ಪ್ರಪಂಚದ ಮೂಲೆ ಮೂಲೆಗಳಿಂದ ಪ್ರವಾಸಿಗರು ಭೇಟಿ ನೀಡಿ, ಶಿಲ್ಪ ಕಲೆಯ ಸೌಂದರ್ಯವನ್ನು ಕಣ್ತುಂಬಿಸಿಕೊಳ್ಳುತ್ತಾರೆ. ಅದೇ ರೀತಿ ಇಂದು ವಿದ್ಯಾರಣ್ಯರ

ಮಾರ್ಗದರ್ಶನದಲ್ಲಿ ಹರಿಹರ ಮತ್ತು ಬುಕ್ಕರಾಯರು ವಿಜಯನಗರ ಸಾಮ್ರಾಜ್ಯವನ್ನು ಸ್ಥಾಪಿಸಿದ ಸಂಸ್ಥಾಪನಾ ದಿನವೂ ಸಹ ಆಗಿದೆ. ಈ ಕುರಿತು ಹಂಪಿಯ ಪ್ರವಾಸಿ ಮಾರ್ಗದರ್ಶಿಯಾಗಿರುವ ವಿರೂಪಾಕ್ಷಿ ಹಂಪಿ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಏಪ್ರಿಲ್ ೨೦ ರಂದು ಮೈಸೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದು ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ. ನಗರದ ಕಲಾಮಂದಿರದಲ್ಲಿ ಆಯೋಜಿಸಿರುವ ಬಸವ ಜಯಂತಿ-೨೦೨೬ ಕಾರ್ಯಕ್ರಮವನ್ನು ಉದ್ಘಾಟಿಸಲಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ೨೦೨೬ರ ಬಸವಶ್ರೀ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.ಹುಣಸೂರಿಗೆ ತೆರಳಿ ಮಾದಳ್ಳಿಯ ಉಕ್ಕಿನಕಂತೆ ಮಠದಲ್ಲಿ ನಡೆಯುವ ಬಸವ ಜಯಂತಿ ಕಾರ್ಯಕ್ರಮ ಮತ್ತು ಬಸವ ಮಹಾದ್ವಾರ ಉದ್ಘಾಟನೆ ಮಾಡಲಿರುವ ಅವರು, ತಾಲ್ಲೂಕು ಕುರುಬರ ಅಭಿವೃದ್ಧಿ ಸಮಿತಿ ವತಿಯಿಂದ ಆಯೋಜಿಸಿರುವ ಗಣಪತಿ ದೇವಸ್ಥಾನ ಉದ್ಘಾಟನೆ ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಹುಣಸೂರಿನಲ್ಲಿ ಗ್ರಾಮದೇವತೆ ಮುತ್ತುಮಾರಮ್ಮ ದೇವಸ್ಥಾನದ ೨೩ನೇ ವರ್ಷದ ವಾರ್ಷಿಕೋತ್ಸವ ಹಾಗೂ ಬೆಳ್ಳಿರಥ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

**<><*<><>*><>**

ಮಾಹಿತಿ ಹಕ್ಕು ಅಧಿನಿಯಮವು ಸರ್ಕಾರಿ ಆಡಳಿತದಲ್ಲಿ ಪಾರದರ್ಶಕತೆಯನ್ನು ತಂದುಕೊಡುತ್ತದೆ ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ತಿಳಿಸಿದರು. ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಲ್ಲಿ ನಡೆದ ಮಾಹಿತಿ ಹಕ್ಕು ಅಧಿನಿಯಮ-೨೦೦೫ ಕುರಿತ ಒಂದು ದಿನದ ವಿಚಾರಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸರ್ಕಾರದ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಇರುವ ಮಾಹಿತಿಯ ಕೊರತೆಯನ್ನು ಈ ಕಾಯಿದೆಯಡಿ ನಿವಾರಿಸಬಹುದು. ಇ-ಆಡಳಿತದ ಮೂಲಕ ಸಾರ್ವಜನಿಕರಿಗೆ ಸಂವಿಧಾನಬದ್ಧ ಆಡಳಿತ ಒದಗಿಸುವುದು ಸಾಧ್ಯ ಎಂದು ಅವರು ಹೇಳಿದರು.

**<><*<><>*><>**

೨೦೨೭ರ ಭಾರತೀಯ ಜನಗಣತಿಯ ಭಾಗವಾದ ಮನೆ ಪಟ್ಟಿ ಮತ್ತು ಮನೆಗಳ ಗಣತಿ ಕಾರ್ಯವು ನಗರಸಭೆ ವ್ಯಾಪ್ತಿಯಲ್ಲಿ ಆರಂಭವಾಗಿದ್ದು, ಸಾರ್ವಜನಿಕರು ಅಗತ್ಯ ಮಾಹಿತಿ ನೀಡಿ ಸಹಕರಿಸಬೇಕೆಂದು ಹೊಸಪೇಟೆ ನಗರಸಭೆಯ ಪೌರಾಯುಕ್ತ ಎರಗುಡಿ ಶಿವಕುಮಾರ್ ತಿಳಿಸಿದ್ದಾರೆ. ಈ ಗಣತಿ ಕಾರ್ಯ ಮೇ ೧೫ ರವರೆಗೆ ನಡೆಯಲಿದೆ. ಗಣತಿದಾರರು ಪಟ್ಟಣದ ಪ್ರತಿ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ. ಗಣತಿದಾರರು ಮನೆ ಮನೆ ಭೇಟಿ ನೀಡಿದಾಗ ಮನೆ ನಿರ್ಮಾಣದ ಸ್ಥಿತಿಗತಿ ಮತ್ತು ವಸತಿ ಸೌಕರ್ಯ ಹಾಗೂ ಮನೆಗಳಲ್ಲಿ ಲಭ್ಯವಿರುವ ಕುಡಿಯುವ ನೀರು, ವಿದ್ಯುತ್ ಮತ್ತು ಶೌಚಾಲಯಗಳಂಥ ಸೌಲಭ್ಯ ಗಳಿಗೆ ಸಂಬಂಧಿಸಿದ ಒಟ್ಟು ೩೩ ವಿವಿಧ ಪ್ರಶ್ನೆಗಳ ಮೂಲಕ ಮಾಹಿತಿ ಸಂಗ್ರಹಿಸಲಾಗುತ್ತದೆ.

**<><*<><>*><>**

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ಗೆಲ್ಲಲು ೧೭೬ ರನ್‌ಗಳ ಗುರಿ ನೀಡಿದೆ. ಗುರಿ ಬೆನ್ನತ್ತಿರುವ ಡೆಲ್ಲಿ ಕ್ಯಾಪಿಟಲ್ಸ್ ತಂಡ ಇತ್ತೀಚಿನ ವರದಿ ಬಂದಾಗ ೧೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೧೭ ರನ್ ಗಳಿಸಿ ಆಡುತ್ತಿದೆ. ಇದಕ್ಕೂ ಮುನ್ನ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೭೫ ರನ್ ಗಳಿಸಿತು. ಈವರೆಗೆ ಆಡಿರುವ ೫ ಪಂದ್ಯಗಳ ಪೈಕಿ ೪ ರಲ್ಲಿ ಗೆದ್ದು, ಒಂದು ಪಂದ್ಯ ಸೋತಿರುವ ಆರ್‌ಸಿಬಿ ೮ ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ೨ನೇ ಸ್ಥಾನದಲ್ಲಿದ್ದರೆ, ೪ ಪಂದ್ಯಗಳನ್ನಾಡಿರುವ ಡೆಲ್ಲಿ ತಂಡ ೨ ಪಂದ್ಯಗಳಲ್ಲಿ ಗೆಲುವು ಕಂಡು ೪ ಅಂಕಗಳೊಂದಿಗೆ ೬ನೇ ಸ್ಥಾನದಲ್ಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**